All India Radio: Bangalore
National Bulletin In Kannada
10.05.2025 / 19.35 hrs
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

- ತಕ್ಷಣದಿಂದಲೇ ಜಾರಿಗೆ ಬರುವಂತೆ ಭಾರತ ಮತ್ತು ಪಾಕಿಸ್ತಾನ ಕದನ ವಿರಾಮ ಘೋಷಣೆ
- ಕದನ ವಿರಾಮ ಘೋಷಿಸಿದ ಉಭಯ ದೇಶಗಳ ನಿರ್ಧಾರವನ್ನು ಅಭಿನಂದಿಸಿದ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್
- ಸುಳ್ಳು ಸುದ್ದಿ ಹರಡುವವರ ವಿರುದ್ಧ ಕಠಿಣ ಕ್ರಮಕ್ಕೆ  ಮುಖ್ಯಮಂತ್ರಿ ಸಿದ್ದರಾಮಯ್ಯ ಸೂಚನೆ
- ವಿಶ್ವ ಬಿಲ್ಲುಗಾರಿಕೆ ಸ್ಪರ್ಧೆ; ಮೂರು ಪದಕ ಮುಡಿಗೇರಿಸಿಕೊಂಡ ಭಾರತ

<><*<><>*><>

ಭಾರತ -ಪಾಕಿಸ್ತಾನ ತಕ್ಷಣದಿಂದ ಜಾರಿಗೆ ಬರುವಂತೆ ಕದನ ವಿರಾಮ ಪಾಲಿಸಲು ಪರಸ್ಪರ ಒಪ್ಪಿಕೊಂಡಿವೆ ಎಂದು ವಿದೇಶಾಂಗ ಕಾರ್ಯದರ್ಶಿ ವಿಕ್ರಮ್ ಮಿಸ್ರಿ ಹೇಳಿದ್ದಾರೆ. ಈ ಕುರಿತು ಅವರು ದೆಹಲಿಯಲ್ಲಿ ಪ್ರಕಟಣೆ ನೀಡಿದ್ದು, ಪಾಕಿಸ್ತಾನದ ಮಿಲಿಟರಿ ಕಾರ್ಯಾಚರಣೆಯ ಮಹಾ ನಿರ್ದೇಶಕರು ಭಾರತದ ಮಿಲಿಟರಿ ಕಾರ್ಯಾಚರಣೆ ಮಹಾನಿರ್ದೇಶಕರೊಂದಿಗೆ ಮಾತುಕತೆ ನಡೆಸಿದ್ದಾರೆ ಎಂದರು.

ಧ್ವನಿ: ವಿಕ್ರಮ್ ಮಿಸ್ರಿ ( ೪೧ ಸೆಕೆಂಡ್ಸ್)

ಭಾರತೀಯ ಕಾಲಮಾನ ಸಂಜೆ ೫ ಗಂಟೆಯಿಂದಲೇ ಜಾರಿಗೆ ಬರುವಂತೆ ಭೂ, ವಾಯು, ನೌಕಾಪಡೆಯ ಮಿಲಿಟರಿ ಕಾರ್ಯಾಚರಣೆಯನ್ನು ನಿಲ್ಲಿಸುವ ಒಪ್ಪಂದಕ್ಕೆ ಬರಲಾಗಿದೆ.  ಈ ನಡುವೆ ಕದನ ವಿರಾಮಕ್ಕೆ ಭಾರತ ಮತ್ತು ಪಾಕಿಸ್ತಾನ ಸಮ್ಮತಿಸಿರುವುದಕ್ಕಾಗಿ ಉಭಯ ದೇಶಗಳ ನಿರ್ಧಾರವನ್ನು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅಭಿನಂದಿಸಿದ್ದಾರೆ. ಸಾಮಾಜಿಕ ಮಾಧ್ಯಮ ಎಕ್ಸ್ ಖಾತೆಯಲ್ಲಿ ಈ ಕುರಿತು ಅಧಿಕೃತ ಮಾಹಿತಿ ಹಂಚಿಕೊಂಡಿರುವ ಅವರು, ಅಮೆರಿಕ ಸಂಧಾನದ ಬಳಿಕ ಎರಡೂ ರಾಷ್ಟ್ರಗಳು ತಕ್ಷಣದಿಂದಲೇ ಜಾರಿಗೆ ಬರುವಂತೆ ಕದನ ವಿರಾಮ

ನಿಯಮ ಪಾಲಿಸಲು ಪರಸ್ಪರ ಒಪ್ಪಿಕೊಂಡಿವೆ. ಇದರಿಂದ ಎರಡೂ ರಾಷ್ಟ್ರಗಳ ಗಡಿಯಲ್ಲಿ ಉಂಟಾಗಿದ್ದ ಬಿಗುವಿನ ಪರಿಸ್ಥಿತಿ ನಿವಾರಣೆಯಾಗಲಿದೆ ಎಂದು ಮಾಹಿತಿ ಹಂಚಿಕೊಂಡಿದ್ದಾರೆ.

<><*<><>*><>

ಸುಳ್ಳು ಸುದ್ದಿ ಹರಡುವವರ ವಿರುದ್ಧ ಕಠಿಣಕ್ರಮ ಕೈಗೊಳ್ಳಬೇಕು ಎಂದು ಕರ್ನಾಟಕ ಮುಖ್ಯಮಂತ್ರಿ ಸಿದ್ದರಾಮಯ್ಯ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ಬೆಂಗಳೂರಿನಲ್ಲಿಂದು ಸುದಿಗಾರರೊಂದಿಗೆ ಮಾತನಾಡಿದ ಅವರು, ಕರಾವಳಿಯಲ್ಲಿ ಭದ್ರತಾ ವ್ಯವಸ್ಥೆ ಬಿಗಿಗೊಳಿಸಬೇಕು. ರಾಜ್ಯದ ಎಲ್ಲಾ ಪ್ರಮುಖ ಸ್ಥಳಗಳಲ್ಲಿ ನಿರಂತರ ಗಸ್ತು ವ್ಯವಸ್ಥೆಯನ್ನು ಹೆಚ್ಚಿಸಬೇಕು ಮತ್ತು ಎಲ್ಲ ಜಿಲ್ಲೆಗಳಲ್ಲಿ ಸಹಾಯ ಕೇಂದ್ರಗಳನ್ನು ತೆರೆದು ಸಹಾಯವಾಣಿ ಆರಂಭಿಸಬೇಕು. ಅಗ್ನಿಶಾಮಕ ದಳದ ಕೇಂದ್ರಗಳನ್ನು ದಿನದ ೨೪ ಗಂಟೆಯೂ ಸನ್ನದ್ಧ ಸ್ಥಿತಿಯಲ್ಲಿಡಬೇಕು. ಪೌರ ರಕ್ಷಣಾ ವ್ಯವಸ್ಥೆಯನ್ನು ಬಲಪಡಿಸಿ ಅವರಿಗೆ ಸೂಕ್ತ ತರಬೇತಿ ನೀಡಬೇಕು. ಎಲ್ಲ ಜಿಲ್ಲೆಗಳಲ್ಲಿ ಪೌರ ರಕ್ಷಣಾ ವ್ಯವಸ್ಥೆಗೆ ಸ್ವಯಂ ಸೇವಕರನ್ನು ನೇಮಿಸುವ ಕಾರ್ಯವನ್ನು ಪ್ರಾರಂಭಿಸಬೇಕು ಹಾಗೂ ಸಾಮಾಜಿಕ ಜಾಲತಾಣಗಳ ಮೇಲೆ ನಿಗಾವಹಿಸಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

<><*<><>*><>

ಭಾರತ-ಪಾಕಿಸ್ತಾನ ಗಡಿಯಲ್ಲಿನ ಪರಿಸ್ಥಿತಿ ಕುರಿತು ವಿದೇಶಾಂಗ ಸಚಿವ ಡಾ.ಎಸ್.ಜೈಶಂಕರ್ ಅವರು, ಅಮೆರಿಕದ ವಿದೇಶಾಂಗ ಕಾರ್ಯದರ್ಶಿ ಮಾರ್ಕೊ ರುಬಿಯೋ ಅವರೊಂದಿಗೆ ಇಂದು ಮಾತುಕತೆ ನಡೆಸಿದ್ದಾರೆ. ಭಾರತದ ಕಾರ್ಯವಿಧಾನ ಯಾವಾಗಲೂ ಜವಾಬ್ದಾರಿಯುತವಾಗಿರುತ್ತದೆ ಎಂದು ಬಳಿಕ ಸಾಮಾಜಿಕ ಜಾಲತಾಣದಲ್ಲಿ ತಿಳಿಸಿದ್ದಾರೆ. ತಪ್ಪು ಕಲ್ಪನೆಗಳನ್ನು ದೂರ ಮಾಡಲು ಎರಡು ಕಡೆಯಿಂದ ಸಂವಹನವನ್ನು ಮರುಸ್ಥಾಪಿಸಲು ವಿಶೇಷವಾಗಿ ಉದ್ವಿಗ್ನ ವಾತಾವರಣವನ್ನು ಕಡಿಮೆ ಮಾಡುವ ಅಗತ್ಯವನ್ನು ವಿದೇಶಾಂಗ ಕಾರ್ಯದರ್ಶಿ ರೂಬಿಯೋ ಪ್ರಮುಖವಾಗಿ ಪ್ರಸ್ತಾಪ ಮಾಡಿದ್ದರು ಎಂದು ಅಮೆರಿಕ ವಿದೇಶಾಂಗ ಇಲಾಖೆಯ ವಕ್ತಾರರು ಹೇಳಿದ್ದಾರೆ.

<><*<><>*><>

ಸಮುದಾಯ ಜಾಗೃತಿ ಅಭಿಯಾನದ ಹೊರತುಪಡಿಸಿ ಇನ್ನಿತರೆ ಕಾರ್ಯಕ್ರಮಗಳಲ್ಲಿ ನಾಗರಿಕರ ರಕ್ಷಣೆಗಾಗಿ ಬಳಸುವ ಸೈರನ್‌ಗಳ ಶಬ್ದವನ್ನು  ಬಸದಂತೆ ಎಲ್ಲಾ ಟಿ.ವಿ ವಾಹಿನಿಗಳಿಗೆ ಸರ್ಕಾರ

ನಿರ್ದೇಶನ ನೀಡಿದೆ. ಸೈರನ್‌ಗಳ ನಿಯಮಿತ ಬಳಕೆಯು ವಾಯು ದಾಳಿ ಸೈರನ್‌ಗಳ ಬಗ್ಗೆ ನಾಗರಿಕರ ಸೂಕ್ಷ್ಮತೆಯನ್ನು ಕಡಿಮೆ ಮಾಡುವ ಸಾಧ್ಯತೆಯಿದೆ. ಈ ನಡುವೆ ಭಾರತ ಹಾಗೂ ಪಾಕಿಸ್ತಾನ ಸಂಘರ್ಷದ ವಾಸ್ತವ ವರದಿಗಳನ್ನು ಮಾತ್ರ ಪ್ರಕಟಿಸಬೇಕು ಎಂದು ಕೇಂದ್ರ ವಾರ್ತಾ ಮತ್ತು ಪ್ರಸಾರ ಖಾತೆ ಸಚಿವ ಅಶ್ವಿನಿ ವೈಷ್ಣವ್ ಮನವಿ ಮಾಡಿದ್ದಾರೆ. ಸುದ್ದಿಗಳನ್ನು ಪ್ರಕಟಿಸುವುದಕ್ಕೂ ಮುನ್ನ ಮಾಹಿತಿಯನ್ನು ಸಮಗ್ರವಾಗಿ ಪರಿಶೀಲಿಸಬೇಕು. ರಕ್ಷಣಾ ಕಾರ್ಯಾಚರಣೆ ಹಾಗೂ ಭದ್ರತಾಪಡೆಗಳ ಚಲನವಲನಗಳನ್ನು ನೇರ ಪ್ರಸಾರ ಮಾಡುವುದನ್ನು ಟಿ.ವಿ ವಾಹಿನಿಗಳು ನಿಲ್ಲಿಸುವಂತೆ ಸಚಿವಾಲಯ ಹೊರಡಿಸಿರುವ ಮಾರ್ಗಸೂಚಿಯನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು ಎಂದು ಕೇಂದ್ರ ಸಚಿವರು ಸೂಚಿಸಿದ್ದಾರೆ.

<><*<><>*><>

ಭಾರತ-ಪಾಕಿಸ್ತಾನ ಗಡಿಯಲ್ಲಿ ಉದ್ವಿಗ್ನ ವಾತಾವರಣದ ನಡುವೆಯೂ ಪ್ರಧಾನಿ ನರೇಂದ್ರ ಮೋದಿ ಅವರು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಮತ್ತು ಮೂರು ಸೇನಾ ಪಡೆಗಳ ಮುಖ್ಯಸ್ಥರೊಂದಿಗೆ ಉನ್ನತಮಟ್ಟದ ಸಭೆ ನಡೆಸಿದರು. ರಾಷ್ಟ್ರೀಯ ಭದ್ರತಾ ಸಲಹೆಗಾರ ಅಜಿತ್ ದೋವಲ್ ಸಭೆಯಲ್ಲಿ ಭಾಗಿಯಾಗಿದ್ದರು. ಪ್ರಧಾನಮಂತ್ರಿ ನರೇಂದ್ರ ಮೋದಿ ನಿವಾಸದಲ್ಲಿ ಈ ಉನ್ನತಮಟ್ಟದ ಸಭೆ ನಡೆಯಿತು.

<><*<><>*><>

ಪಾಕಿಸ್ತಾನದ ಭಯೋತ್ಪಾದಕ ನೆಲೆಗಳ ಮೇಲೆ ಆಪರೇಷನ್ 'ಸಿಂಧೂರ' ಕಾರ್ಯಾಚರಣೆ ಆರಂಭಿಸಿದ ನಂತರ ಪಾಕಿಸ್ತಾನದಲ್ಲಿ ಜೈಶ್-ಎ-ಮೊಹಮ್ಮದ್ ಮತ್ತು ಲಷ್ಕರ್-ಎ-ತೈಬಾದ ಐವರು ಉಗ್ರಗಾಮಿಗಳನ್ನು ಹತ್ಯೆಮಾಡಲಾಗಿದೆ. ಮುದಾಸರ್ ಖಾದಿಯಾನ್ ಖಾಸ್ ಅಲಿಯಾಸ್ ಅಬು ಜುಂದಾಲ್, ಮೌಲನಾ ಮಸುದ್ ಅಜರ್‌ನ ಸೋದರ ಸಂಬಂಧಿ ಹಫೀಜ್ ಮುಹಮ್ಮದ್ ಜಮೀಲ್, ಮೊಹಮ್ಮದ್ ಯೂಸುಫ್ ಅಜರ್, ಖಾಲಿದ್ ಅಲಿಯಾಸ್ ಅಬು ಆಕಾಶ ಮತ್ತು ಮೊಹಮ್ಮದ್ ಹಸನ್ ಖಾನ್ ಮೃತಪಟ್ಟಿದ್ದಾರೆ ಎಂದು ಉನ್ನತಮೂಲಗಳು ತಿಳಿಸಿವೆ.

<><*<><>*><>

ಆಫ್ಘಾನಿಸ್ತಾನ ಭೂ ಪ್ರದೇಶದ ಮೇಲೆ ಭಾರತ ಕ್ಷಿಪಣಿ ದಾಳಿ ನಡೆಸಿದೆ ಎಂದು ಪಾಕಿಸ್ತಾನ ಮಾಡಿರುವ ಆರೋಪದಲ್ಲಿ ಯಾವುದೇ ಸತ್ಯಾಂಶ ಇಲ್ಲ ಎಂದು ಅಲ್ಲಿನ ಸರ್ಕಾರ ಸ್ಪಷ್ಟನೆ ನೀಡಿದೆ. ರಕ್ಷಣಾ ಸಚಿವಾಲಯದ ವಕ್ತಾರ ಇನಾಯತುಲ್ಲಾ ಖವಾರಿಜ್ಮಿ ಈ ಸಂಬಂಧ ಹೇಳಿಕೆ ನೀಡಿದ್ದು,

ಇದು ಸತ್ಯಕ್ಕೆ ದೂರವಾದದ್ದು ಎಂದು ಹೇಳಿದ್ದಾರೆ. ಈ ನಡುವೆ ನವದೆಹಲಿಯಲ್ಲಿಂದು ವಿದೇಶಾಂಗ ಕಾರ್ಯದರ್ಶಿ ವಿಕ್ರಮ್ ಮಿಸ್ರಿ ಸುದ್ದಿಗಾರರೊಂದಿಗೆ ಮಾತನಾಡಿ, ಭಾರತದ ಕ್ಷಿಪಣಿಗಳು ಆಫ್ಘಾನಿಸ್ತಾನದ ಭೂಪ್ರದೇಶದ ಮೇಲೆ ದಾಳಿ ಮಾಡಿವೆ ಎಂದು ಸತ್ಯಕ್ಕೆ ದೂರವಾದ ಆರೋಪವನ್ನು ಪಾಕಿಸ್ತಾನ ಮಾಡುತ್ತಿದೆ. ಆದರೆ, ಆಫ್ಘಾನಿಸ್ತಾನದ ಜನತೆಗೆ ತಮ್ಮ ಶತ್ರುಗಳು ಯಾರು, ಮಿತ್ರರು ಯಾರು ಎಂಬುದು ಚೆನ್ನಾಗಿ ಮನವರಿಕೆಯಾಗಿದೆ ಎಂದು ತಿಳಿಸಿದ್ದಾರೆ.

<><*<><>*><>

ಮಹಿಳಾ ಸಬಲೀಕರಣದಲ್ಲಿ ಸ್ವಸಹಾಯ ಗುಂಪುಗಳ ಪಾತ್ರ ನಿರ್ಣಯಕ ಎಂದು ಕರ್ನಾಟಕ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಪ್ರತಿಪಾದಿಸಿದ್ದಾರೆ. ಮಂಗಳೂರಿನಲ್ಲಿ ನಡೆದ ಕಾರ್ಯಕ್ರಮದಲ್ಲಿ ಅವರು ಈ ವಿಷಯ ತಿಳಿಸಿದ್ದಾರೆ. ವಿವಿಧ ಕ್ಷೇತ್ರಗಳಲ್ಲಿ ಮಹಿಳೆಯರು ಹೆಚ್ಚು ಸಕ್ರಿಯವಾಗುತ್ತಿರುವ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿದರು ಮತ್ತು ಸರ್ಕಾರಿ ಯೋಜನೆಗಳ ಪ್ರಯೋಜನವನ್ನು ಸಂಪೂರ್ಣವಾಗಿ ಸದುಪಯೋಗ ಮಾಡಿಕೊಳ್ಳುವಂತೆ ಮಹಿಳಾ ಸಮುದಾಯಕ್ಕೆ ರಾಜ್ಯಪಾಲರು ಕಿವಿ ಮಾತು ಹೇಳಿದರು.

<><*<><>*><>

ಉತ್ತರಾಖಂಡ ವಾಯು ಸಂಚಾರ ನಿಯಂತ್ರಣ, ಎಟಿಸಿ ಯಿಂದ ಅನುಮತಿ ಪಡೆದ ನಂತರ ಉತ್ತರಾಖಂಡದ ಕೇದರನಾಥ ಧಾಮಕ್ಕೆ ಹೆಲಿಕಾಪ್ಟರ್ ಸೇವೆಯನ್ನು ಆರಂಭಿಸಲಾಗಿದೆ ಎಂದು ಉತ್ತರಾಖಂಡ ಮುಖ್ಯಮಂತ್ರಿ ಪುಷ್ಕರ್ ಸಿಂಗ್ ದಾಮಿ ಹೇಳಿದ್ದಾರೆ. ವಾಯು ಸಂಚಾರ ನಿಯಂತ್ರಣ ದೇಶದ ಎಲ್ಲಾ ವಿಮಾನ ಪ್ರಯಾಣವನ್ನು ಪರಿಶೀಲಿಸಿದ್ದು, ಈಗ ಅದು ಯಾವುದೇ ಅಡೆತಡೆ ಇಲ್ಲದೆ ಸುಗಮವಾಗಿ ನಡೆಯುತ್ತಿದೆ. ಈವರೆಗೆ ೪ ಲಕ್ಷಕ್ಕೂ ಹೆಚ್ಚು ಯಾತ್ರಿಕರು ದೇವಾಲಯಗಳಿಗೆ ಭೇಟಿ ನೀಡಿದ್ದಾರೆ ಎಂದು ಮುಖ್ಯಮಂತ್ರಿಯವರು ಸಾಮಾಜಿಕ ಮಾಧ್ಯಮಗಳಲ್ಲಿ ಪೋಸ್ಟ್ ಮಾಡಿದ್ದಾರೆ. ಬರುವ ಎಲ್ಲಾ ಪ್ರವಾಸಿಗರಿಗೆ ಸುರಕ್ಷತೆ ಒದಗಿಸಲು ಸರ್ಕಾರ ಆದ್ಯತೆ ನೀಡಿದೆ ಎಂದು ಮುಖ್ಯಮಂತ್ರಿಯವರು ತಿಳಿಸಿದ್ದಾರೆ.

<><*<><>*><>

ಪಾಕಿಸ್ತಾನ ಸಾಮಾಜಿಕ ಮಾಧ್ಯಮಗಳಲ್ಲಿ ಅಪಪ್ರಚಾರ ಮಾಡುತ್ತಿದೆ, ಈ ನಿರ್ಣಾಯಕ ಸಮಯದಲ್ಲಿ ಪ್ರತಿಯೊಂದು ಮಾಹಿತಿಯನ್ನು ಎಚ್ಚರಿಕೆಯಿಂದ ಪರಿಶೀಲಿಸುವುದು ಬಹಳ ಮುಖ್ಯ. ಸಂಶಯಾಸ್ಪದ ವಿಷಯವನ್ನು, ವಿಶೇಷವಾಗಿ ಭಾರತೀಯ ಸಶಸ್ತ್ರ ಪಡೆಗಳ ಬಗ್ಗೆ ಅಥವಾ ಪ್ರಸ್ತುತ

ಪರಿಸ್ಥಿತಿಗೆ ಸಂಬಂಧಿಸಿದ ಯಾವುದೇ ಮಾಹಿತಿಯನ್ನು ಪಿಐಬಿ ಫ್ಯಾಕ್ಟ್ ಚೆಕ್‌ಗೆ ವರದಿ ಮಾಡಬೇಕು. ನೀವು ಅಂತಹ ವಿಷಯವನ್ನು ವಾಟ್ಸಾಪ್ ಸಂಖ್ಯೆ ೮೭೯೯೭-೧೧೨೫೯ ಮತ್ತು ಇಮೇಲ್ ಐಡಿ - factcheck@pib.gov.in ನಲ್ಲಿಯೂ ಹಂಚಿಕೊಳ್ಳಬಹುದು.

<><*<><>*><>

ಶಾಂಘೈನಲ್ಲಿ ನಡೆಯುತ್ತಿರುವ ವಿಶ್ವ ಬಿಲ್ಲುಗಾರಿಕೆಯಲ್ಲಿ ಭಾರತ ಮೂರು ಪದಕಗಳನ್ನು ಮುಡಿಗೇರಿಸಿಕೊಂಡಿದೆ. ಪುರುಷರ ವಿಭಾಗದಲ್ಲಿ ಭಾರತದ ಅಭಿಷೇಕ್ ವರ್ಮಾ, ಓಜಾಸ್ ಡಿಯೋಟೇಲ್ ಮತ್ತು ರಿಷಬ್ ಯಾದವ್ ತಂಡ, ಫೈನಲ್ ಪಂದ್ಯದಲ್ಲಿ ಮೆಕ್ಸಿಕೋ ತಂಡವನ್ನು ೨೩೨-೨೨೮ ಅಂಕಗಳಿಂದ ಸೋಲಿಸಿ ಚಿನ್ನದ ಪದಕ ಗಳಿಸಿದ್ದಾರೆ. ಮಹಿಳಾ ವಿಭಾಗದಲ್ಲಿ ಭಾರತದ ಜಯೋತಿ ಸುರೇಖಾ ವೆನ್ನಮ್, ಮಧುರಾ ಧಮಂಗೋಂಕರ್ ಮತ್ತು ಚಿಕಿತಾ ತಾನಿಪ್ಪಿ ಅವರು ಫೈನಲ್‌ನಲ್ಲಿ ಮೆಕ್ಸಿಕೋ ತಂಡದ ವಿರುದ್ಧ ಸೆಣಸಿ ಬೆಳ್ಳಿ ಪದಕ ಪಡೆದರು. ಮಿಶ್ರ ತಂಡದ ಸ್ಪರ್ಧೆಯಲ್ಲಿ ಭಾರತ ಮಲೇಷಿಯಾವನ್ನು ಪರಾಭವಗೊಳಿಸಿ ಕಂಚಿನ ಪದಕ ಗೆದ್ದುಕೊಂಡಿದೆ.

<><*<><>*><>

ಖೇಲೋ ಇಂಡಿಯಾ ಯುವಕರ ಕ್ರೀಡಾಕೂಟದ ಅಂತಿಮ ದಿನದಂದು ಶೂಟಿಂಗ್ ಕ್ರೀಡಾಪಟುಗಳು ಅಸಾಧಾರಣ ಕೌಶಲ್ಯ ಪ್ರದರ್ಶಿಸಿದರು. ೨೫ ಮೀಟರ್ ಪಿಸ್ತೂಲ್ ಮಹಿಳಾ ಪೈನಲ್‌ನಲ್ಲಿ ದೆಹಲಿಯ ನಾಮ್ಯಾ ಕಪೂರ್ ೨೭ ಅಂಕ ಗಳಿಸಿ ಚಿನ್ನದ ಪದಕ ಮುಡಿಗೇರಿಸಿಕೊಂಡರು. ಮಧ್ಯಪ್ರದೇಶದ ಅಂಜಲಿ ಮಹೇಂದ್ರ ಭಗವತ್ ೨೬ ಅಂಕಗಳೊಂದಿಗೆ ಬೆಳ್ಳಿ ಪದಕ ಪಡೆದರು. ರಾಜಸ್ಥಾನದ ಖಾನಕ್ಯ್ಯಾಸ್ ೧೯ ಅಂಕಗಳೊಂದಿಗೆ ಕಂಚಿನ ಪದಕಕ್ಕೆ ತೃಪ್ತಿಪಡೆದುಕೊಂಡರು. ಈ ನಡುವೆ ಇಂದಿರಾಗಾಂಧಿ ಒಳಂಗಾಣ ಕ್ರೀಡಾಂಗಣದಲ್ಲಿ ಜಿಮ್ನಾಸ್ಟಿಕ್ ಅರ್ಹತಾ ಪಂದ್ಯಗಳು ನಡೆಯುತ್ತಿವೆ.

<><*<><>*><>

ಭಾರತ-ಪಾಕಿಸ್ತಾನ ಗಡಿ ರೇಖೆಯಲ್ಲಿ ಉದ್ವಿಗ್ನವಾತಾವರಣ ಉಂಟಾಗಿರುವ ಹಿನ್ನೆಲೆಯಲ್ಲಿ ರಾಜಸ್ಥಾನ ಮುಖ್ಯಮಂತ್ರಿ ಬಜನ್‌ಲಾಲ್ ಶರ್ಮಾ ಸರ್ವಪಕ್ಷ ಸಭೆ ಕರೆದಿದ್ದಾರೆ. ಗಡಿ ಜಿಲ್ಲೆಯ ಜನರು ಮತ್ತು ಆಸ್ತಿಪಾಸ್ತಿ ರಕ್ಷಣೆ ವಿಚಾರಗಳನ್ನು ಈ ಸಭೆಯಲ್ಲಿ ಪ್ರಸ್ತಾಪಿಸಲಾಗುವುದು ಎಂದು ವಾರ್ತಾ ಸಂಸ್ಥೆ ವರದಿ ಮಾಡಿದೆ. ಸರ್ಕಾರ ತೆಗೆದುಕೊಂಡಿರುವ ಸುರಕ್ಷಿತ ಕ್ರಮಗಳನ್ನು ಮುಖ್ಯಮಂತ್ರಿಯವರು ರಾಜಕೀಯ ಪಕ್ಷಗಳ ನಾಯಕರೊಂದಿಗೆ ವಿನಿಮಯ ಮಾಡಿಕೊಂಡು ಈ ಸಂಬಂಧ ಸಲಹೆ ಸೂಚನೆ ನೀಡುವಂತೆ ಕೋರಿದ್ದಾರೆ. ದೇಶದ ರಕ್ಷಣೆಗಾಗಿ ಸೇನಾ ಪಡೆಗಳು

ನಡೆಸುತ್ತಿರುವ ಕಾರ್ಯಾಚರಣೆಗೆ ಪ್ರತಿಯೊಬ್ಬ ನಾಗರಿಕರೂ ಬೆಂಬಲ ಕೊಡಬೇಕು ಮತ್ತು ಅಖಂಡವಾಗಿ ನಿಲ್ಲಬೇಕು ಎಂದು ಸರ್ಕಾರ ಹೇಳಿಕೆಯಲ್ಲಿ ತಿಳಿಸಿದೆ.

<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>

<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಗ್ಗೆ ೭.೩೫ ಕ್ಕೆ <>*><>